KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂಸತ್ (ಅಧಿವೇಶನ)

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 31/1/2020

# ನಾಳೆ ಕೇಂದ್ರ ಬಜೆಟ್

**ನವದೆಹಲಿ:** ಆದಾಯ ತೆರಿಗೆ ಪಾವತಿದಾರರಿಗೆ ರಿಯಾಯಿತಿ ಇದೆಯೋ ಇಲ್ಲವೋ, ಯಾವ ವರ್ಗದವರಿಗೆ ಸರ್ಕಾರ ಏನು ಕೊಡುಗೆ ನೀಡಲಿದೆ ಎನ್ನುವ ವಿಚಾರ ಫೆ.1ರಂದು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಲಿರುವ 2020–21ನೇ ಸಾಲಿನ ಬಜೆಟ್‌ನಲ್ಲಿ ಗೊತ್ತಾಗಲಿದೆ. ಇದು ನಿರ್ಮಲಾ ಅವರ 2ನೇ ಪೂರ್ಣಾವಧಿ ಬಜೆಟ್. ದೇಶದ ಅರ್ಥ ವ್ಯವಸ್ಥೆಯು ತೀರಾ ಪ್ರತಿಕೂಲ ಪರಿಸ್ಥಿತಿಯಲ್ಲಿ ಇರುವ ಹಿನ್ನೆಲೆಯಲ್ಲಿ ಯಾವ ರೀತಿಯ ಚೇತೋಹಾರಿ ಕ್ರಮಗಳನ್ನು ಅವರು ಪ್ರಕಟಿಸಲಿದ್ದಾರೆ ಎನ್ನುವುದೇ ಕುತೂಹಲಕ್ಕೆ ಕಾರಣವಾಗಿದೆ.

**ಕಿಸಾನ್ ಯೋಜನೆಗೆ ಕತ್ತರಿ?:** ಪಿಎಂ-ಕಿಸಾನ್ ಯೋಜನೆಯ ಅನುದಾನ ಶೇ.20ರಷ್ಟು ಕಡಿಮೆಯಾಗುವ ಸಾಧ್ಯತೆಯಿದೆ. 2019–20ನೇ ವಿತ್ತೀಯ ವರ್ಷಕ್ಕೆ 75 ಸಾವಿರ ಕೋಟಿ ರೂ. ಮಂಜೂರು ಮಾಡಲಾಗಿತ್ತು. ಆದರೆ ಈ ಬಾರಿ ಅದನ್ನು 60 ಸಾವಿರ ಕೋಟಿ ರೂ.ಗೆ ಇಳಿಸುವ ಸಾಧ್ಯತೆ ಇದೆ. ಕೆಲವು ರಾಜ್ಯಗಳಲ್ಲಿ ಯೋಜನೆ ಜಾರಿಗೆ ಅಡ್ಡಿ ಉಂಟಾಗಿರುವ ಕಾರಣ ಈ ನಿರ್ಧಾರ ಕೈಗೊಳ್ಳಬಹುದು ಎನ್ನಲಾಗಿದೆ.

# ಎಲ್ಲಾ ವಿಚಾರಗಳ ಬಗ್ಗೆ ಚರ್ಚೆ ಮಾಡೋಣ

ಉದಯವಾಣಿ 31/1/20

**ನವದೆಹಲಿ:** ಸಂಸತ್‌ನ ಬಜೆಟ್ ಅಧಿವೇಶನ ಜ.31ರಿಂದ ಶುರುವಾಗಲಿರುವ ಹಿನ್ನೆಲೆಯಲ್ಲಿ ಗುರುವಾರ ನವದೆಹಲಿಯಲ್ಲಿ ಸರ್ವಪಕ್ಷಗಳ ಸಭೆ ನಡೆಯಿತು. ಈ ವೇಳೆ ಪೌರತ್ವ ಕಾಯ್ದೆ ವಿರೋಧಿಸಿ ನಡೆಯುತ್ತಿರುವ ಪ್ರತಿಭಟನೆಗಳು, ಕುಸಿಯುತ್ತಿರುವ ಅರ್ಥವ್ಯವಸ್ಥೆಯ ಪರಿಸ್ಥಿತಿ ಬಗ್ಗೆ ಕಾಂಗ್ರೆಸ್ ನೇತೃತ್ವದ ಪ್ರತಿಪಕ್ಷಗಳು ಪ್ರಸ್ತಾಪ ಮಾಡಿವೆ. ಸಭೆಯಲ್ಲಿ ಹಾಜರಿದ್ದ ಪ್ರಧಾನಿ ಮೋದಿ, ಅರ್ಥ ವ್ಯವಸ್ಥೆ ಸೇರಿದಂತೆ ಎಲ್ಲಾ ಪ್ರಮುಖ ವಿಚಾರಗಳ ಬಗ್ಗೆ ಚರ್ಚೆಗೆ ಸರ್ಕಾರ ಸಿದ್ಧ ಎಂಬ ಭರವಸೆ ನೀಡಿದ್ದಾರೆ.

**■ ಸರ್ವ ಪಕ್ಷಗಳ ಸಭೆಯಲ್ಲಿ ಪ್ರಧಾನಿ ಮೋದಿ ಆಶ್ವಾಸನೆ**

ಕೇಂದ್ರ ಸರ್ಕಾರ ಪೌರತ್ವ ವಿರೋಧಿ ಹೋರಾಟಗಾರರ ಮಾತುಗಳನ್ನು ಕೇಳಲೂ ಸಿದ್ಧವಿಲ್ಲ ಎಂದು ಪ್ರತಿಪಕ್ಷಗಳ ನಾಯಕರು ಸಭೆಯಲ್ಲಿ ದೂರಿದ್ದಾರೆ. ಸಭೆಯ ವಿವರ ನೀಡಿದ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ, 'ಹೆಚ್ಚುತ್ತಿರುವ ನಿರುದ್ಯೋಗ ಸಮಸ್ಯೆ, ಪೌರತ್ವ ಕಾಯ್ದೆ ವಿರೋಧಿ ಪ್ರತಿಭಟನೆಗಳ ಬಗ್ಗೆ ಪ್ರತಿಪಕ್ಷಗಳು ಪ್ರಸ್ತಾಪಿಸಿವೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಬಂಧನದಲ್ಲಿ ಇರುವ ರಾಜಕೀಯ ನಾಯಕರನ್ನು ಬಿಡುಗಡೆ ಮಾಡಬೇಕು ಎಂಬ ಒತ್ತಾಯವನ್ನೂ ಮಾಡಿವೆ' ಎಂದಿದ್ದಾರೆ.

'ಯಾವುದೇ ವಿಚಾರಗಳ ಬಗ್ಗೆ ತಮ್ಮೊಳಗೇ ಮಾತನಾಡಿಕೊಳ್ಳದೆ, ಸಂಸತ್‌ನಲ್ಲಿ ಚರ್ಚೆ ನಡೆಸುವಂತೆ ರಾಜಕೀಯ ಪಕ್ಷಗಳಿಗೆ ಪ್ರಧಾನಿ ಮೋದಿ ಮನವಿ ಮಾಡಿದ್ದಾರೆ. ಅರ್ಥ ವ್ಯವಸ್ಥೆಯ ಮೇಲೆ ಉಂಟಾಗಿರುವ ಪ್ರತಿಕೂಲ ಪರಿಸ್ಥಿತಿ ಬಗ್ಗೆ ಚರ್ಚೆಗಳು ನಡೆಯಬೇಕು ಎಂದು ಕೆಲವು ಸದಸ್ಯರು ಬಯಸಿದಾಗ ಅದಕ್ಕೂ ಮೋದಿ ಸ್ವಾಗತಿಸಿದರು' ಎಂದು ಜೋಶಿ ಹೇಳಿದ್ದಾರೆ.

ಪೌರತ್ವ ಕಾಯ್ದೆ ವಿರುದ್ಧದ ಪ್ರತಿಭಟನೆಗಳ ಬಗ್ಗೆ ಸರ್ಕಾರ ನಿರ್ಲಕ್ಷ್ಯ ಧೋರಣೆ ತಳೆದಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಸಮಗ್ರ ಚರ್ಚೆಯ ಬಳಿಕವೇ ಅದನ್ನು ಅಂಗೀಕರಿಸಲಾಗಿದೆ. ಸದ್ಯ ನಡೆಯುತ್ತಿರುವ ಪ್ರತಿಭಟನೆಗೆ ಬೆಂಬಲಿಸುವವರೇ ಈ ಬಗ್ಗೆ ಪ್ರಶ್ನೆಗಳನ್ನು ಕೇಳಬೇಕು ಎಂದಿದ್ದಾರೆ.

**ನಾಳೆ ಪ್ರತಿಪಕ್ಷಗಳ ಸಭೆ:** ಸಂಸತ್ ಅಧಿವೇಶನದಲ್ಲಿ ರಣತಂತ್ರದ ಬಗ್ಗೆ ಚರ್ಚೆ ನಡೆಸಲು ಫೆ.1ರಂದು ಪ್ರತಿಪಕ್ಷಗಳ ಸಭೆ ನಡೆಯಲಿದೆ. ಸಿಎಎ, ಅರ್ಥ ವ್ಯವಸ್ಥೆ ಸೇರಿದಂತೆ ಪ್ರಮುಖ ವಿಚಾರಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗುತ್ತದೆ.